**ಸಾಕ್ಷಿಗೆ ದಿನಾಂಕ:22-04-2026 ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**:: ಪಾಟೀ ಸವಾಲು :: ವಾದಿ ಪರ ಶ್ರೀ. GCT ವಕೀಲರಿಂದ ::**

1 ನೇ ಪ್ರತಿವಾದಿ ದೋರನಾಳು ಬಸಪ್ಪ ರವರ ಮಗ ಆಗಿರುತ್ತಾರೆ ಎಂದರೆ ಸರಿ. ಈಗ ಹೇಳುತ್ತಿರುವ ಬಸಪ್ಪ ರವರಿಗೆ 4 ಜನ ಗಂಡು ಹಾಗೂ ಇಬ್ಬರು ಹೆಣ್ಣು ಮಕ್ಕಳು ಎಂದರೆ ನನಗೆ ಗೊತ್ತಿಲ್ಲ. ಐಟಂ 8 ಆಸ್ತಿಯು ವಾದಿ ಮತ್ತು 1 ರಿಂದ 5 ನೇ ಪ್ರತಿವಾದಿಗಳ ಒಟ್ಟು ಕುಟುಂಬದ ಆಸ್ತಿ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ಅದು 1 ನೇ ಪ್ರತಿವಾದಿಯ ಸ್ವಯಾರ್ಜಿತ ಸ್ವತ್ತು ಆಗಿರುತ್ತದೆ ಎಂದು ನುಡಿಯುತ್ತಾರೆ. ಮೇಲೆ ಹೇಳಿದ ಬಸಪ್ಪನ ಮಕ್ಕಳು ಇದುವರೆಗೂ ಅವರ ಕುಟುಂಬದ ಆಸ್ತಿಗಳನ್ನು ವಿಭಾಗ ಮಾಡಿಕೊಂಡಿರುವುದಿಲ್ಲ ಎಂದರೆ ನನಗೆ ಗೊತ್ತಿಲ್ಲ. ಐಟಂ 8 ಆಸ್ತಿಯನ್ನು ಬಸಪ್ಪ ರವರ ಒಟ್ಟು ಕುಟುಂಬದ ಆದಾಯದಿಂದ ಖರೀದಿ ಮಾಡಲಾಗಿರುತ್ತದೆ ಎಂದರೆ ಸರಿಯಲ್ಲ. ದಾವಾ ಐಟಂ 8 ರಲ್ಲಿ ವಾದಿಗೆ 1/6 ನೇ ಹಕ್ಕು ಇರುತ್ತದೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿ ನಮಗೆ ಐಟಂ 8 ನ್ನು ಮಾರಾಟ ಮಾಡುವ ಸಮಯದಲ್ಲಿ ವಾದಿಯ ಸಹಿ ಪಡೆದಿರುವುದಿಲ್ಲ ಎಂದರೆ ಸರಿ.

**:: ಮರು ವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

sd/-

ಪ್ರಧಾನ ಸಿ.ಜೆ ಮತ್ತು ಜೆ.ಎಂ.ಎಫ್.ಸಿ

ತರೀಕೆರೆ.

ಸಾಕ್ಷಿಯ ಸಹಿ: